ಅ) ರಾಜ್ಯದ ಇನ್ನು ಎಷ್ಟು ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರ ಕೊರತೆ ಇದೆ? ಈ ಕೊರತೆ ತುಂಬಲು ಕೈಗೊಂಡ ಕ್ರಮಗಳೇನು?

ಆ) ರಾಜ್ಯದ ಪ್ರತಿಯೊಂದು ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಸ್ವಚ್ಛತೆ ಕಾಪಾಡಲು ಸರ್ಕಾರ ಏನಾದರೂ ಕ್ರಮ ಕೈಗೊಳ್ಳುವುದೇ?

ಡಾ: ಎ.ಬಿ.ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) 130

550 ವೈದ್ಯಾಧಿಕಾರಿ ಹುದ್ದೆಗಳನ್ನು ನೇರ ನೇಮಕಾತಿಯಿಂದ ಭರ್ತಿ ಮಾಡುವ ಕಾರ್ಯ ಪ್ರಕ್ರಿಯೆಯಲ್ಲಿದೆ. ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿನ ಖಾಲಿ ವೈದ್ಯಾಧಿಕಾರಿಗಳ ಹುದ್ದೆಗಳನ್ನು ಮತ್ತು ತಜ್ಞ ವೈದ್ಯಾಧಿಕಾರಿ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲು ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳಿಗೆ ಅಧಿಕಾರ ನೀಡಲಾಗಿದೆ.

ಆ) ಪ್ರಾಥಮಿಕ ಆರೋಗ್ಯ ಕೇಂದ್ರದ ನಿಯಂತ್ರಣ ಹೊಂದಿರುವ ವೈದ್ಯಾಧಿಕಾರಿಗಳು ಆಸ್ಪತ್ರೆ ಆವರಣವನ್ನು ಶುಚಿಯಾಗಿಡುವ ಅಧಿಕಾರವನ್ನು ಹೊಂದಿರುತ್ತಾರೆ.

ಜಮಖಂಡಿ ತಾಲ್ಲೂಕಿನ ಸಾವಳಗಿಯಲ್ಲಿ ಸರ್ಕಾರಿ ಪದವಿ ಕಾಲೇಜು ಪ್ರಾರಂಭ.

205(180)

ಶ್ರೀ ಪಾಟೀಲ್.ಜೆ.ಟಿ.(ಬೀಳಗಿ): ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೀಳಗಿ ಮತಕ್ಷೇತ್ರದ ಜಮಖಂಡಿ ತಾಲ್ಲೂಕಿನ ಸಾವಳಗಿಯಲ್ಲಿ ಸರ್ಕಾರಿ ಪದವಿ ಕಾಲೇಜಿನ ಬೇಡಿಕೆ ಹಲವಾರು ವರ್ಷಗಳಿಂದ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಅಲ್ಲಿ ಕಾಲೇಜು ಪ್ರಾರಂಭಿಸದೆ ಇರುವುದಕ್ಕೆ ಕಾರಣಗಳೇನು?

ಇ) 2001ನೇ ಇಸವಿಯ ಜೂನ್ ತಿಂಗಳಲ್ಲಿಯಾದರೂ ಕಾಲೇಜ್ ಪ್ರಾರಂಭಿಸಲು ಸರ್ಕಾರ ಅನುಮತಿ ನೀಡುವುದೇ?

Dr.G.Parameshwar (Minister for Higher Education):

ಅ) ಹೌದು.

ಆ ಮತ್ತು ಇ) ಆಯವ್ಯಯದ ಮಿತಿಯಲ್ಲಿ ಈಗ ಹಾಲಿ ಅಸ್ಥಿತ್ವದಲ್ಲಿರುವ ಕಾಲೇಜುಗಳನ್ನು ನಡೆಸಲು ಮಾತ್ರ ಸಾಕಾಗುತ್ತದೆ.

ರಾಜ್ಯದಲ್ಲಿ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಶಾಲೆಗಳಲ್ಲಿ ಕಂಪ್ಯೂಟರ್ ಅಳವಡಿಕೆ ಬಗ್ಗೆ.

206(181)

ಶ್ರೀ ಜಿ.ಟಿ.ಪಾಟೀಲ್ (ಬೀಳಗಿ): ಮಾನ್ಯ ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ 1000 ಶಾಲೆಗಳಲ್ಲಿ ಕಂಪ್ಯೂಟರ್ ಶಿಕ್ಷಣ ಪ್ರಾರಂಭಿಸಲು ತೆಗೆದುಕೊಂಡ ನಿರ್ಣಯದ ಪ್ರಕಾರ ಈಗ ಎಷ್ಟು ಶಾಲೆಗಳಲ್ಲಿ ಕಂಪ್ಯೂಟರ್ ಅಳವಡಿಸಲಾಗಿದೆ.

ಆ) ಕಂಪ್ಯೂಟರ್ ಪೂರೈಸಿದ ಶಾಲೆಗಳಲ್ಲಿ ಕಂಪ್ಯೂಟರ್ ತರಬೇತಿ ಹೊಂದಿದ ಶಿಕ್ಷಕರು ಇದ್ದಾರೆಯೇ?

ಇ) ಬಾಗಲಕೋಟೆ ಜಿಲ್ಲೆಯ ಎಷ್ಟು ಶಾಲೆಗಳಿಗೆ ಕಂಪ್ಯೂಟರ್ ಅಳವಡಿಸಲಾಗಿದೆ?

ಶ್ರೀ ಹೆಚ್.ವಿಶ್ವನಾಥ (ಪ್ರಾಥಮಿಕ ಹಾಗೂ ಪ್ರೌಢಶಿಕ್ಷಣ ಸಚಿವರು):

ಅ) ಒಂದು ಸಾವಿರ ಸರ್ಕಾರಿ ಪ್ರೌಢಶಾಲೆಗಳಲ್ಲಿ ಕಂಪ್ಯೂಟರ್ ಶಿಕ್ಷಣ ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗಿದ್ದು ಕಂಪ್ಯೂಟರ್ ಅಳವಡಿಸಲು ಶಾಲೆಗಳಲ್ಲಿ ಕೊಠಡಿ ಪೂರ್ಣ ಸಿದ್ಧತೆ ಮುಕ್ತಾಯ ಹಂತ ತಲುಪಿದ್ದು ಅತೀ ಶೀಘ್ರದಲ್ಲಿ ಎಲ್ಲಾ ಒಂದು ಸಾವಿರ ಶಾಲೆಗಳಲ್ಲೂ ಕಂಪ್ಯೂಟರ್‌ಗಳನ್ನು ಅಳವಡಿಸಲು ಕ್ರಮ ಕೈಗೊಳ್ಳಲಾಗುವುದು.

ಆ) ಕ್ರಮ ಕೈಗೊಳ್ಳಲಾಗುತ್ತಿದೆ.

ಇ) ಒಟ್ಟು 31 ಸರ್ಕಾರಿ ಪ್ರೌಢಶಾಲೆಗಳಲ್ಲಿ ಬಾಗಲಕೋಟೆ ಜಿಲ್ಲೆಯಲ್ಲಿ ಈ ಯೋಜನೆಯಡಿಯಲ್ಲಿ ಕಂಪ್ಯೂಟರ್‌ಗಳನ್ನು ಅಳವಡಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.